ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER

ದಿನಾಂಕ : DATE 14/2/

# ಜಂಟಿ ಕಾರ್ಯದರ್ಶಿಯನ್ನು ಅನ್ಯ ಇಲಾಖೆಗೆ ವರ್ಗಾವಣೆ ಮಾಡಿ

» ಬಿಬಿಎಂಪಿ ಅಧಿಕಾರಿ, ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಸಿಎಂಗೆ ಪತ್ರ

ಬೆಂಗಳೂರು: ಸರ್ಕಾರದ ವಿವಿಧ ಇಲಾಖೆಗಳಿಂದ ಅಧಿಕಾರಿಗಳನ್ನು ಬಿಬಿಎಂಪಿಗೆ ನಿಯಮಬಾಹಿರವಾಗಿ ಎರವಲು ಸೇವೆಗೆ ನಿಯೋಜಿಸುತ್ತಿರುವ ನಗರಾಭಿವೃದ್ಧಿ ಇಲಾಖೆ ಜಂಟಿ ಕಾರ್ಯದರ್ಶಿ ಹಿದಾಯತುಲ್ಲಾ ಅವರನ್ನು ಅನ್ಯ ಇಲಾಖೆಗೆ ವರ್ಗಾಯಿಸುವಂತೆ ಆಗ್ರಹಿಸಲಾಗಿದೆ. ಇಲ್ಲವಾದಲ್ಲಿ ಎಲ್ಲ ಬಿಬಿಎಂಪಿ ನೌಕರರು ಸಾಮೂಹಿಕ ರಜೆ ಹಾಕಿ ಪ್ರತಿಭಟಿಸುವುದಾಗಿ ಎಚ್ಚರಿಸಿ ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದೆ.

ವೃಂದ ಮತ್ತು ನೇಮಕಾತಿ ನಿಯಮಾವಳಿ 2019ರ ಕರಡು ಅಧಿಸೂಚನೆಯನ್ನು ಆಂಗ್ಲ ಭಾಷೆಯಲ್ಲಿ ಪ್ರಕಟಿಸಲಾಗಿದೆ. ಹೀಗಾಗಿ, ಸಿ ಮತ್ತು ಡಿ ದರ್ಜೆ ನೌಕರರಿಗೆ ಆಂಗ್ಲ ಭಾಷೆ ಬಾರದ ಹಿನ್ನೆಲೆಯಲ್ಲಿ ಆಕ್ಷೇಪಣೆ ಸಲ್ಲಿಸಲು ಸಾಧ್ಯವಾಗುತ್ತಿಲ್ಲ. ಇದೇ ರೀತಿ ಅನೇಕ ಕಾನೂನು ಬಾಹಿರ ಅಧಿಸೂಚನೆಗಳನ್ನು ಮಾತೃಭಾಷೆಯಲ್ಲಿ ಹೊರಡಿಸದೆ ಆಂಗ್ಲ ಭಾಷೆಯಲ್ಲಿ ಹೊರಡಿಸಿ ಹಿದಾಯತುಲ್ಲಾ ಕರ್ತವ್ಯಲೋಪ ಎಸಗುತ್ತಿದ್ದಾರೆ ಎಂದು ಆರೋಪಿಸಲಾಗಿದೆ.